## ಕರ್ನಾಟಕ ಸರ್ಕಾರ

ಸಂಖ್ಯೆ : ಇಡಿ 76 ಪಿಜಿಸಿ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ :19–06–2020

### –: ಸುತ್ತೋಲೆ :–

ವಿಷಯ: 2020–21ನೇ ಸಾಲಿನಲ್ಲಿ ಖಾಸಗಿ ಅನುದಾನ ರಹಿತ ಶಾಲೆಗಳು ಶಾಲಾ ಶುಲ್ಕಗಳನ್ನು ಪರಿಷ್ಕರಿಸದಿರುವ ಬಗ್ಗೆ.

*****

ಕರ್ನಾಟಕ ಶಿಕ್ಷಣ ಕಾಯ್ದೆ, 1983ರಡಿಯಲ್ಲಿ ರಚಿಸಿರುವ ನಿಯಮಗಳು, 1999ರ ನಿಯಮ 4ರಲ್ಲಿ ಉಪ ನಿಯಮ (4)ರಲ್ಲಿ ಖಾಸಗಿ ಅನುದಾನ ರಹಿತ ಶಾಲೆಗಳಲ್ಲಿ ವಿದ್ಯಾರ್ಥಿಗಳ ಬೋಧನಾ ಶುಲ್ಕಗಳನ್ನು ಸರ್ಕಾರ ನಿಗಧಿಪಡಿಸಲು ಅವಕಾಶ ಕಲ್ಪಿಸಿದೆ.

ಪ್ರಸ್ತುತ ಕೊರೊನಾ ವೈರಸ್ (ಕೋವಿಡ್–19) ಸಾಂಕ್ರಮಿಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ ದೇಶದಾದ್ಯಂತ ದಿ:24.03.2020ರಿಂದ ಲಾಕ್‌ಡೌನ್ ಘೋಷಣೆ ಮಾಡಿದ್ದು, ಇದರಿಂದಾಗಿ ಕೈಗಾರಿಕೆಗಳು ಹಾಗೂ ಆರ್ಥಿಕ ಚಟುವಟಿಕೆಗಳು ಸ್ಥಬ್ಧವಾಗಿರುವ ಹಿನ್ನೆಲೆಯಲ್ಲಿ, ಸಾರ್ವಜನಿಕರು ಸಾಕಷ್ಟು ಆರ್ಥಿಕ ಸಂಕಷ್ಟಕ್ಕೆ ಒಳಗಾಗಿರುತ್ತಾರೆ. ಈ ಹಿನ್ನೆಲೆಯಲ್ಲಿ, ಖಾಸಗಿ ಅನುದಾನ ರಹಿತ ಶಾಲೆಗಳ ಪೋಷಕರು ಈ ಶೈಕ್ಷಣಿಕ ಸಾಲಿನಲ್ಲಿ ವಿದ್ಯಾರ್ಥಿಗಳ ಬೋಧನಾ ಶುಲ್ಕವನ್ನು ಹೆಚ್ಚಿಸದಂತೆ ಶಾಲಾ ಸಂಸ್ಥೆಗಳಿಗೆ ನಿರ್ದೇಶನ ನೀಡುವಂತೆ ಸಾಕಷ್ಟು ಮನವಿಗಳು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಆದ್ದರಿಂದ, ಕರ್ನಾಟಕ ಶಿಕ್ಷಣ ನಿಯಮ 1999ರಲ್ಲಿ ಕಲ್ಪಿಸಿರುವ ಅವಕಾಶವನ್ನು ಸರ್ಕಾರವು ಸಾರ್ವಜನಿಕರು ಆರ್ಥಿಕ ಸಂಕಷ್ಟಕ್ಕೆ ಒಳಗಾಗಿರುವುದನ್ನು ಪರಿಗಣಿಸಿ ಕರ್ನಾಟಕ ಶಿಕ್ಷಣ ಕಾಯ್ದೆ–1983, ಸೆಕ್ಷನ್–133, ಉಪನಿಯಮ–(2)ರ ಅಡಿಯಲ್ಲಿನ ಅಧಿಕಾರವನ್ನು ಚಲಾಯಿಸಿ ಎಲ್ಲಾ ಖಾಸಗಿ ಅನುದಾನ ರಹಿತ ಶಾಲೆಗಳು 2020–21ನೇ ಶೈಕ್ಷಣಿಕ ಸಾಲಿನಲ್ಲಿ ಯಾವುದೇ ಬೋಧನಾ ಶುಲ್ಕವನ್ನು ಹೆಚ್ಚಿಸಬಾರದೆಂದು ಸೂಚಿಸಿದೆ. ಒಂದುವೇಳೆ ಶಾಲಾ ಆಡಳಿತ ಮಂಡಳಿಯವರು 2019–20ನೇ ಶೈಕ್ಷಣಿಕ ಸಾಲಿಗಿಂತ ಹೆಚ್ಚಿನ ಬೋಧನಾ ಶುಲ್ಕವನ್ನು ಮಕ್ಕಳು/ಪೋಷಕರಿಂದ ಸಂಗ್ರಹಿಸಿದಲ್ಲಿ ಕರ್ನಾಟಕ ಶಿಕ್ಷಣ ಕಾಯ್ದೆ–124[ಎ]ರಡಿ ಕ್ರಮ ಜರುಗಿಸಲಾಗುವುದೆಂದು ಈ ಮೂಲಕ ಸೂಚಿಸಿದೆ.

(ಶೇಖರ) 19/06/2020
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ),
ಶಿಕ್ಷಣ ಇಲಾಖೆ (ಪ್ರಾಥಮಿಕ)

**ಇವರಿಗೆ:**

1. ಮಹಾಲೇಖಪಾಲರು, (ಅಡಿಟ್ 1 & 2) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಅಧ್ಯಕ್ಷರು, ಜಿಲ್ಲಾ ಶಿಕ್ಷಣ ನಿಯಂತ್ರಣ ಪ್ರಾಧಿಕಾರ, ಜಿಲ್ಲಾಧಿಕಾರಿಗಳ ಕಛೇರಿ, ರಾಜ್ಯದ ಎಲ್ಲಾ ಜಿಲ್ಲೆಗಳ
4. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲುಬುರ್ಗಿ/ಧಾರವಾಡ.
5. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ನಿರ್ದೇಶನಾಲಯ, ಬೆಂಗಳೂರು.
6. ನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸಂಸ್ಥೆ, ಬೆಂಗಳೂರು.